**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರ ಶೂನ್ಯ ವೇಳೆಯ ಪ್ರಸ್ತಾವಕ್ಕೆ ಉತ್ತರಿಸುವ ಕುರಿತು.**

**ವಿಷಯ :**

ಸಾರ್ವತ್ರಿಕ ಚುನಾವಣಾ ಕಾರ್ಯಗಳಿಗೆ ಒಂದು ವರ್ಷ ಸಮಯದಿಂದ ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಕೆಲವು ಶಿಕ್ಷಕರುಗಳನ್ನು ನಿಯೋಜಿಸಲಾಗಿದೆ. ಬೋಧನ ಜೊತೆಗೆ ಬಿ.ಎಲ್.ಓ. ಕಾರ್ಯಗಳನ್ನು ಕಂದಾಯ ಇಲಾಖೆಯ ಅಧಿಕಾರಿಗಳ ಮಾರ್ಗದರ್ಶನದಂತೆ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. ಇದರಿಂದಾಗಿ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತುಂಬಾ ತೊಂದರೆ ಉಂಟಾಗುತ್ತಿದೆ. ಈ ಸಂಗತಿಯನ್ನು ಆರು ತಿಂಗಳ ಹಿಂದೆ ರಾಜ್ಯ ಮುಖ್ಯ ಕಾರ್ಯದರ್ಶಿಗಳ ಗಮನಕ್ಕೆ ತರಲಾಯಿತು. ಕಳೆದ ಅಧಿವೇಶನದಲ್ಲೂ ಸಹ ಪ್ರಸ್ತಾಪಿಸಲಾಯಿತು. ಆದರೂ ಈ ಕಾರ್ಯದಿಂದ ಶಿಕ್ಷಕರನ್ನು ಬಿಡುಗಡೆಗೊಳಿಸಿರುವುದಿಲ್ಲ. ಎಸ್ .ಎಸ್. ಎಲ್.ಸಿ ಪರೀಕ್ಷೆ ಹತ್ತಿರವಾಗಿದ್ದು, ವಿದ್ಯಾರ್ಥಿಗಳಿಗೆ ಪೂರ್ಣ ಪ್ರಮಾಣದ ಪಠ್ಯ ಬೋಧನೆಯನ್ನು ಮಾಡಲು ಸಾಧ್ಯವಾಗುತ್ತಿಲ್ಲ. ಬಿ.ಎಲ್.ಓ ಗಳಾಗಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ಕಂದಾಯ ಇಲಾಖೆಯ ಅಧಿಕಾರಿಗಳಿಂದ ದಿನನಿತ್ಯ ಕಿರುಕುಳ ಹೆಚ್ಚಾಗಿದೆ. ಬಿ.ಎಲ್.ಓ. ಗಳು ತರಗತಿಯಲ್ಲಿ ಬೋಧನೆ ಮಾಡುವಾಗ ಸಾರ್ವಜನಿಕರಿಂದ ಮಾಹಿತಿಗಾಗಿ ದೂರವಾಣಿಗಳು ಬರುತ್ತಿರುತ್ತವೆ. ಎಲ್ಲಕ್ಕಿಂತ ಮಿಗಿಲಾಗಿ 55 ವರ್ಷ ಮೀರಿರುವ ಶಿಕ್ಷಕ/ಶಿಕ್ಷಕಿಯರನ್ನು ಬಿ.ಎಲ್.ಓ. ಕಾರ್ಯಗಳಿಗೆ ನಿಯೋಜಿಸಿರುವುದರಿಂದ ಅವರುಗಳು ತುಂಬಾ ತೊಂದರೆಗೊಳಗಾಗಿದ್ದಾರೆ. ನಗರಗಳಲ್ಲಿ 2-3 ಮಹಡಿಗಳನ್ನು ಹತ್ತಿ ಕಾರ್ಯನಿರ್ವಹಿಸುವುದು ತುಂಬಾ ಕಷ್ಟಸಾಧ್ಯವಾಗಿದೆ.

ಶಿಕ್ಷಕರ ಸೇವೆಯನ್ನು ಚುನಾವಣಾ ಹಾಗೂ ಇತರೆ ಕಾರ್ಯಗಳಿಗೆ ದೀರ್ಘ ಕಾಲ ನಿಯೋಜಿಸಬಾರದೆಂದು ಸರ್ವೋಚ್ಚ ನ್ಯಾಯಾಲಯದ ನಿರ್ದೇಶನವಿದ್ದರೂ ಅದನ್ನು ಪಾಲನೆ ಮಾಡದೇ ಇರುವುದರಿಂದ ನ್ಯಾಯಾಲಯದ ಅದೇಶವನ್ನು ಉಲ್ಲಂಘಿಸಿದಂತಾಗಿದೆ. ಒಂದು ವರ್ಷ ಕಾಲದಿಂದ ಕೆಲವು ಶಿಕ್ಷಕರುಗಳನ್ನು ಬಿ.ಎಲ್.ಓ. ಗಳನ್ನಾಗಿ ನೇಮಕ ಮಾಡಿಕೊಂಡಿರುವುದರಿಂದ ವಿದ್ಯಾರ್ಥಿಗಳ ಶಿಕ್ಷಕಣಕ್ಕೆ ತೊಂದರೆಯಾಗಿರುವುದಲ್ಲದೇ ಪರೀಕ್ಷೆ ಸಮೀಪಿಸುತ್ತಿರುವುದರಿಂದ ಕೂಡಲೇ ಬಿ.ಎಲ್.ಓ. ಗಳ ಕರ್ತವ್ಯದಿಂದ ತಕ್ಷಣ ಬಿಡುಗಡೆಗೊಳಿಸಬೇಕೆಂದು ಮತ್ತೊಮ್ಮೆ ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರನ್ನು ಒತ್ತಾಯಿಸುತ್ತೇನೆ.

**ಉತ್ತರ :-**

- ಶಾಲಾ ಶಿಕ್ಷಣ ಇಲಾಖೆಯ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರನ್ನು ಬೂತ್ ಮಟ್ಟದ ಅಧಿಕಾರಿಗಳನ್ನಾಗಿ(ಬಿ.ಎಲ್.ಓ) ಹಾಗೂ ಬೋಧಕೇತರ ಕಾರ್ಯಗಳಿಗೆ ನಿಯೋಜನ ಮಾಡದಿರುವ ಬಗ್ಗೆ ಶಾಲಾ ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಆಯಾ ತರಗತಿಗಳಲ್ಲಿ ನಿಗಧಿಗೊಳಿಸಲಾಗಿರುವ ಪಠ್ಯವನ್ನು ಪೂರ್ಣಗೊಳಿಸಲು ಬೇಕಾದ ಅವಧಿಯನ್ನು ಮತ್ತು ಶಾಲಾ ರಜಾ ದಿನಗಳನ್ನು ಅಂದರೆ ಬೇಸಿಗೆ

ದಸರಾ/ಕ್ರಿಸ್ ಮಸ್ ಈ ಸಾರ್ವತ್ರಿಕ ರಜಾದಿನಗಳಲ್ಲಿ ಗಣನೆಗೆ ತೆಗೆದುಕೊಂಡು ಶಾಲಾ ಕೆಲಸದ ದಿನಗಳನ್ನು ಕನಿಷ್ಟ 244 ದಿನಗಳೆಂದು ನಿಗಧಿ ಪಡಿಸಲಾಗಿದೆ. ಆದರೆ ಶಾಲಾ ಶಿಕ್ಷಕರುಗಳನ್ನು ಜನಗಣತಿ, ಚುನಾವಣಾ ಕಾರ್ಯ, ಮಕ್ಕಳ ಗಣತಿ ಇವುಗಳಲ್ಲಿ ತೊಡಗಿಸಿಕೊಳ್ಳುವುದರ ಪರಿಣಾಮವಾಗಿ ಕನಿಷ್ಟ 244 ಶಾಲಾ ಕರ್ತವ್ಯದ ದಿನಗಳಲ್ಲಿ ಪರೀಕ್ಷೆಗಳು ಮತ್ತು ಮೌಲ್ಯಾಂಕನ ಕಾರ್ಯಕ್ಕಾಗಿ /ಪಠ್ಯೇತರ ಚಟುವಟಿಕೆಗಳ /ಪಠ್ಯ ಚಟುವಟಿಕೆಗಳ/ ಸ್ಪರ್ದೆಗಳ ನಿರ್ವಹಣಾ ಕಾರ್ಯ/ ಮೌಲ್ಯಮಾಪನ ಮತ್ತು ಫಲಿತಾಂಶ ವಿಶ್ಲೇಷಣಾ ಕಾರ್ಯಕ್ಕಾಗಿ ಮತ್ತು ಶಾಲಾ ಸ್ಥಳೀಯ ರಜೆಗಳು ಒಟ್ಟಾರೆ 64 ದಿನಗಳು ಶಿಕ್ಷಕರುಗಳ ಸೇವೆಯನ್ನು ಮೇಲ್ಕಂಡ ಕಾರ್ಯಕ್ಕೆ ತೊಡಗಿಸಿ ಕೊಳ್ಳುತ್ತಿರುವುದರಿಂದ ವಿಧ್ಯಾರ್ಥಿಗಳ ಬೋಧನಾ-ಕಲಿಕಾ ಪ್ರಕ್ರಿಯೆಗೆ ಕೇವಲ 180 ದಿನಗಳು ಉಳಿಯುತ್ತದೆ. ಕನಿಷ್ಟ 180 ದಿನಗಳನ್ನು ಬೋಧನಾ ಕೆಲಸ ನಿರ್ವಹಿಸಲು ನಿಗದಿಪಡಿಸಿದ್ದರು ಸಹ ವಾಸ್ತವಿಕವಾಗಿ ಶಿಕ್ಷಕರುಗಳು ಅಷ್ಟು ದಿನಗಳು ಬೋಧನಾ ಕಾರ್ಯಕ್ಕೆ ಲಭ್ಯವಾಗುತ್ತಿಲ್ಲ. ಇದರಿಂದ ಬೋಧನಾ ಕೆಲಸವು ಕುಂಠಿತವಾಗುತ್ತಿದ್ದು ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಯ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತಿದೆ. ಪ್ರಾಥಮಿಕ ಶಾಲೆಯ 5ನೇ ತರಗತಿ, 8ನೇತರಗತಿ ಮತ್ತು ಪ್ರೌಢಶಾಲೆಯ 10ನೇ ತರಗತಿಗೆ ರಾಜ್ಯ ಮಟ್ಟದಲ್ಲಿ ಪರೀಕ್ಷೆಗಳು ನಡೆಯುವುದರಿಂದ, ಶಿಕ್ಷಕರುಗಳು ಬೋಧನಾ ಕಾರ್ಯಕ್ಕೆ ಹೆಚ್ಚು ಒತ್ತು ಕೊಟ್ಟು ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಹೆಚ್ಚಾಗಿ ಸ್ಪಂಧಿಸಿ ಹಾಗೂ ಉತ್ತಮ ಫಲಿತಾಂಶ ತರುವ ದೃಷ್ಟಿಯಿಂದ ಸರ್ಕಾರವು ಹಲವು ಆದೇಶಗಳ ಮೂಲಕ ಶಿಕ್ಷಕರಗಳನ್ನು ಬೋಧಕೇತರ ಕೆಲಸಗಳಿಗೆ ನಿಯೋಜಿಸುವುದು ನಿಷೇಧಿಸಿರುತ್ತದೆ.

- ಶಿಕ್ಷಕರುಗಳನ್ನು ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಗಳಿಗೆ ನಿಯೋಜಿಸುವುದರಿಂದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತುಂಬಲಾರದ ನಷ್ಟ ಉಂಟಾಗಿ ಸಂವಿಧಾನಾತ್ಮಕ ಹಕ್ಕಿಗೆ ಧಕ್ಕೆ ತರುವಂತಾಗಿರುತ್ತದೆ. ಈ ವಿಚಾರದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯ ಹಾಗೂ ರಾಜ್ಯ ಉಚ್ಚ ನ್ಯಾಯಾಲಯಗಳು ಶಿಕ್ಷಕರನ್ನು ಬೋಧಕೇತರ ಕಾರ್ಯಗಳಿಗೆ ನಿಯೋಜಿಸಬಾರದೆಂದು ಆದೇಶಗಳನ್ನು ನೀಡಿರುತ್ತವೆ. ಆದ್ದರಿಂದ ಶಿಕ್ಷಕರನ್ನು ಮತದಾರರ ಪಟ್ಟಿ/ಬೋದಕೇತರ ಕೆಲಸಕ್ಕೆ ನಿಯೋಜನ ಮಾಡಬಾರದೆಂದು ಸರ್ಕಾರದ ಸುತ್ತೋಲೆಗಳಲ್ಲಿ ತಿಳಿಸಿರುತ್ತದೆ. ಈ ಕಾರಣದಿಂದ ಮತದಾರರ ಪಟ್ಟಿಗಳ ಪರಿಷ್ಕರಣೆ ಕಾರ್ಯಗಳಿಗೆ ನಿಯೋಜಿಸುವ ಬಗ್ಗೆ ಮಾನ್ಯ ಉಚ್ಚ ನ್ಯಾಯಾಲಯ ಹಾಗೂ ಸರ್ವೋಚ್ಚ ನ್ಯಾಯಾಲಯ ನೀಡಿರುವ ತೀರ್ಪುಗಳಲ್ಲಿ ಶಿಕ್ಷಕರುಗಳನ್ನು ಶಿಕ್ಷಣೇತರ ಕಾರ್ಯಗಳಿಗೆ ನಿಯೋಜಿಸುವುದರಿಂದ ನ್ಯಾಯಾಲಯ ಹಾಗೂ ಸರ್ಕಾರದ ಆದೇಶಗಳ ಉಲ್ಲಂಘನೆ ಆಗುತ್ತದೆ. ಆದ್ದರಿಂದ ಶಾಲಾ ಶಿಕ್ಷಣ ಇಲಾಖೆಯ ಪ್ರಾಥಮಿಕ/ಪ್ರೌಢ ಶಾಲಾ ಶಿಕ್ಷಕರನ್ನು ಚುನಾವಣಾ ಮತದಾರರ ಪಟ್ಟಿ ಪರಿಷ್ಕರಿಸುವ ಸಲುವಾಗಿ ಬೂತ್ ಮಟ್ಟದ ಅಧಿಕಾರಿಗಳನ್ನಾಗಿ ನಿಯೋಜನೆ ಮಾಡಬಾರದೆಂದು ವಿಶೇಷ ಆಯುಕ್ತರು (ಚುನಾವಣೆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೆಂಗಳೂರು ಇವರಿಗೆ ಕೋರಲಾಗಿತ್ತು.

- ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮುಖ್ಯ ಆಯುಕ್ತರು ಇವರು ದಿನಾಂಕ: 05-08-2023 ರಲ್ಲಿ ಪತ್ರ ಬರೆದು ಶಾಲಾ ಶಿಕ್ಷಕರುಗಳನ್ನು ರಜೆ ದಿನಗಳಲ್ಲಿ ಹಾಗೂ ಬೋಧಕೇತರ ಅವಧಿಯಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕಾರ್ಯಕ್ಕೆ ಬಳಸಿಕೊಳ್ಳಲು ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಹಾಗೂ ವಿವಿಧ ನ್ಯಾಯಾಲಯಗಳ ಆದೇಶದಂತೆ ಅವಕಾಶಗಳಿರುವುದರಿಂದ ಮತದಾರರ ಮನೆ ಮನೆ ಸಮೀಕ್ಷೆ ಕಾರ್ಯ ಕಾಲಮಿತಿಯೊಳಗೆ ನಡೆಸಬೇಕಾದ ಕಾರಣ ಸಂಬಂಧಿಸಿದ ಶಿಕ್ಷಕರನ್ನು ಬಿ.ಎಲ್.ಓ ಕಾರ್ಯಗಳಿಗೆ ನಿಯೋಜಿಸಲು ಕೋರಿರುತ್ತಾರೆ.

- ಮುಖ್ಯ ಚುನಾವಣಾಧಿಕಾರಿಗಳ ಕಛೇರಿಯಿಂದ ದಿನಾಂಕ:03-08-2023 ರಲ್ಲಿ ಮತಗಟ್ಟೆ ಅಧಿಕಾರಿಗಳ ಹುದ್ದೆಗೆ ಶಿಕ್ಷಕರನ್ನು ನಿಯೋಜನೆ ಮಾಡುವ ಕುರಿತು ರಾಜ್ಯದ ಎಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳಿಗೆ ಬರೆದಿರುವ ಪತ್ರದಲ್ಲಿ ಜಿಲ್ಲಾ ವ್ಯಾಪ್ತಿಯಲ್ಲಿನ ಶಿಕ್ಷಕರನ್ನು ಚುನಾವಣಾ ಕರ್ತವ್ಯಕ್ಕೆ ನಿಯೋಜಿಸುವಾಗ ಈ ಕೆಳಕಂಡ ಕ್ರಮಗಳನ್ನು ಅನುಸರಿಸಿ ಕ್ರಮವಹಿಸಲು ಸೂಚಿಸಿರುತ್ತದೆ.
    1. ಯಾವುದೇ ಶಾಲೆಯಲ್ಲಿ ಶೇಕಡ 100 ಕ್ಕೆ 100 ರಷ್ಟು ಎಲ್ಲಾ ಶಿಕ್ಷಕರನ್ನು ನಿಯೋಜಿಸಬಾರದು.
    2. ಶಿಕ್ಷಕರನ್ನು ನಿಯೋಜಿಸುವಾಗ ರಜಾ ದಿನಗಳಲ್ಲಿ ಹಾಗೂ ಬೋಧನಾ ಸಮಯವನ್ನು ಹೊರತುಪಡಿಸಿ ಚುನಾವಣಾ ಕರ್ತವ್ಯಕ್ಕೆ ನಿಯೋಜಿಸುವುದು.
    3. Terminal Illness ಹೊಂದಿರುವ ಶಿಕ್ಷಕರನ್ನು ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಬಾರದು.
    4. ಮುಂದಿನ 06 ತಿಂಗಳ ಅವಧಿಯಲ್ಲಿ ಸೇವೆಯಿಂದ ವಯೋನಿವೃತ್ತಿ ಹೊಂದಲಿರುವ ಶಿಕ್ಷಕರನ್ನು ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಬಾರದೆಂದು ಸೂಚಿಸಿರುತ್ತದೆ.

- ಈ ಎರಡು ಆದೇಶಗಳಲ್ಲಿನ ಅಂಶಗಳನ್ನು ಉಲ್ಲೇಖಿಸಿ ಶಾಲಾ ಶಿಕ್ಷಣ ಇಲಾಖೆ ಶಿಕ್ಷಕರನ್ನು ಬೂತ್ ಮಟ್ಟದ ಅಧಿಕಾರಿಗಳನ್ನಾಗಿ (ಬಿ.ಎಲ್.ಓ) ನಿಯೋಜನೆ ಮಾಡುವ ಮುನ್ನ ಈ ಕೆಳಕಂಡ ಅಂಶಗಳನ್ನು ಪಾಲಿಸಿಕೊಂಡು ನಿಯೋಜಿಸಿಕೊಳ್ಳಲು ದಿನಾಂಕ:02-09-2023 ರಂದು ವಿಶೇಷ ಆಯುಕ್ತರು(ಚುನಾವಣೆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೆಂಗಳೂರು ಇವರಿಗೆ ಪತ್ರ ಬರೆಯಲಾಗಿದೆ.
    1. ಯಾವುದೇ ಶಾಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಅಭ್ಯಾಸಕ್ಕೆ ತೊಂದರೆಯಾಗದಂತೆ ಶೇಕಡ 100 ಕ್ಕೆ 100 ರಷ್ಟು ಶಿಕ್ಷಕರನ್ನು ನಿಯೋಜಿಸದೆ ಶೇಕಡ 50 ರಷ್ಟು ಶಿಕ್ಷಕರನ್ನು ಮಾತ್ರ ನಿಯೋಜಿಸಿಕೊಳ್ಳುವುದು.
    2. ಪ್ರೌಢಶಾಲಾ ಶಿಕ್ಷಕರುಗಳನ್ನು ಶೈಕ್ಷಣಿಕ ಹಿತದೃಷ್ಟಿಯಿಂದ ಬೂತ್ ಮಟ್ಟದ ಅಧಿಕಾರಿಗಳನ್ನಾಗಿ (ಬಿ.ಎಲ್.ಓ) ನಿಯೋಜಿಸಬಾರದು.

3. ಶಿಕ್ಷಕರನ್ನು ನಿಯೋಜಿಸುವಾಗ ರಜಾ ದಿನಗಳಲ್ಲಿ ಹಾಗೂ ಬೋಧನಾ ಸಮಯವನ್ನು ಹೊರತುಪಡಿಸಿ ಚುನಾವಣಾ ಕರ್ತವ್ಯಕ್ಕೆ ನಿಯೋಜಿಸುವುದು.
4. Terminal illness ಹೊಂದಿರುವ ಶಿಕ್ಷಕರನ್ನು ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಬಾರದು.
5. ಮುಂದಿನ 06 ತಿಂಗಳ ಅವಧಿಯಲ್ಲಿ ಸೇವೆಯಿಂದ ವಯೋನಿವೃತ್ತಿ ಹೊಂದಲಿರುವ ಶಿಕ್ಷಕರನ್ನು ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಬಾರದೆಂದು ಸೂಚಿಸಿರುತ್ತದೆ.

**ಸಂಖ್ಯೆ : ಇಪಿ 199 ಎಲ್‌ಬಿಪಿ 2023**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.